ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಬೀದರ್ ಜಿಲ್ಲೆಯಲ್ಲಿ ಮೂಲ ಸೌಕರ್ಯಗಳಿಲ್ಲದ ಶಾಲೆಗಳ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು) –

10 (84) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಸುಮಾರು (ಖಾಸಗಿ) ಶಾಲೆಗಳು ಮೂಲಭೂತ ಸೌಕರ್ಯಗಳಿಲ್ಲದೆ ನಡೆಯುತ್ತಿದ್ದು, ಅವುಗಳಲ್ಲಿ ಸರ್ಕಾರದಿಂದ ಪರವಾನಿಗೆ ಪಡೆದಿರುವ ಶಾಲೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಮೂಲಭೂತ ಸೌಕರ್ಯಗಳಿಲ್ಲದಂತಹ ಶಾಲೆಗಳ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಪರವಾನಿಗೆ ಇಲ್ಲದೆ ಹೆಚ್ಚುವರಿ ತರಗತಿಯನ್ನು ನಡೆಸುತ್ತಿರುವ ಸಂಸ್ಥೆಗಳಿಗೆ ಆರ್ಟಿಇ ವಿದ್ಯಾರ್ಥಿಗಳ ಶಾಲಾ ಶುಲ್ಕ ಸಂದಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಪ್ರಕರಣಗಳೆಷ್ಟು; ಆರ್. ಟಿ. ಇ. ಶುಲ್ಕ ನೀಡಿದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?